**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪಂರಾ 199 ಗ್ರಾಪಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17-04-2020

**ಸುತ್ತೋಲೆ**

**ವಿಷಯ:** ಕೋವಿಡ್-19 ಸಾಂಕ್ರಾಮಿಕ ಪಿಡುಗು ಮತ್ತು ಗ್ರಾಮ ಪಂಚಾಯತಿಗಳಲ್ಲಿ ಲಾಕ್ ಡೌನ್ ವಿಸ್ತರಿಸಿರುವ ಹಿನ್ನೆಲೆಯಲ್ಲಿ 14ನೇ ಹಣಕಾಸು ಆಯೋಗದ ಅನುದಾನವನ್ನು ವಿನಿಯೋಗಿಸುವ ಬಗ್ಗೆ ಮಾರ್ಗಸೂಚಿಗಳ ಕುರಿತು.

**ಉಲ್ಲೇಖ:**
1. ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಅ.ಸ.ಪತ್ರ ಸಂ. ಎನ್-11011/9/2016-ಎಫ್‌ಡಿ, ದಿನಾಂಕ 03.04.2020.
2. ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಅ.ಸ.ಪತ್ರ ಸಂ. ಎನ್-11011/9/2016-ಎಫ್‌ಡಿ, ದಿನಾಂಕ 15.04.2020.

* * *

14ನೇ ಹಣಕಾಸು ಆಯೋಗದ 2019-20ನೇ ಸಾಲಿನ ಸಾಮಾನ್ಯ ಮೂಲ ಅನುದಾನವನ್ನು 2 ಕಂತುಗಳಲ್ಲಿ ದಿನಾಂಕ:13.06.2019 ಹಾಗೂ:04.11.2019ರಂದು ಬಿಡುಗಡೆ ಮಾಡಲಾಗಿದೆ. ಈ ಅನುದಾನವನ್ನು ವೆಚ್ಚ ಮಾಡುವ ಅವಧಿಯನ್ನು ದಿನಾಂಕ:31.03.2021ರ ಅವಧಿಯವರೆಗೂ ವಿಸ್ತರಿಸಲಾಗಿದೆ. ಈ ಅನುದಾನವನ್ನು ಗ್ರಾಮ ಪಂಚಾಯತಿಗಳು ಗ್ರಾಮೀಣ ಪ್ರದೇಶದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅದರಲ್ಲಿಯೂ ಪ್ರಮುಖವಾಗಿ ನೈರ್ಮಲ್ಯ ವ್ಯವಸ್ಥೆಯನ್ನು ರೂಪಿಸಲು ಆದ್ಯತೆಯ ಮೇರೆಗೆ ವೆಚ್ಚ ಮಾಡುವುದಕ್ಕೆ ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ಪಿಡುಗು ಇಡೀ ರಾಷ್ಟ್ರದಲ್ಲಿ ವ್ಯಾಪಿಸುತ್ತಿರುವುದರಿಂದ ಗ್ರಾಮೀಣ ಮಟ್ಟದಲ್ಲಿ ಈ ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಹಾಗೂ ನಿವಾರಿಸಲು ಗ್ರಾಮ ಪಂಚಾಯತಿಗಳು ಕಾರ್ಯನಿರ್ವಹಿಸಬೇಕಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಛತೆ, ನೈರ್ಮಲ್ಯತೆಯನ್ನು ಕಾಪಾಡುವುದು ಹಾಗೂ ಕುಡಿಯುವ ನೀರನ್ನು ಒದಗಿಸುವ ಮುಂತಾದ ಮೂಲಭೂತ ಸೌಲಭ್ಯಗಳ ಜೊತೆಗೆ ಈ ಸಾಂಕ್ರಾಮಿಕ ರೋಗವನ್ನು ನಿರ್ವಹಿಸುವ ಹಾಗೂ ತಡೆಗಟ್ಟುವ ಜವಾಬ್ದಾರಿಯು ಗ್ರಾಮ ಪಂಚಾಯತಿಗಳ ಮೇಲಿದ್ದು, ಈ ಕೆಳಕಂಡ ಕಾಮಗಾರಿಗಳನ್ನು ತೆಗೆದುಕೊಳ್ಳಲು ಉಲ್ಲೇಖ(1)ರ ಅರೆ ಸರ್ಕಾರಿ ಪತ್ರದಲ್ಲಿ ತಿಳಿಸಿರುವಂತೆ ಅವಕಾಶ ಕಲ್ಪಿಸಲಾಗಿದೆ

1. ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಳ್ಳಿಗಳಲ್ಲಿ ಚರಂಡಿಗಳನ್ನು ಸ್ವಚ್ಛಗೊಳಿಸುವುದು.

2. ರಸ್ತೆ ಮತ್ತು ರಸ್ತೆ ಬದಿಯ ತ್ಯಾಜ್ಯಗಳನ್ನು ಹೊರಗಡೆ ಸಾಗಿಸುವುದು,
3. ಪ್ರತಿಯೊಂದು ರಸ್ತೆ ಮತ್ತು ಚರಂಡಿಗಳ ಮೇಲೆ ಕ್ರಿಮಿನಾಶಕ ಹಾಗೂ ವೈರಾಣು ನಾಶಕಗಳನ್ನು ಸಿಂಪಡಿಸುವುದು,
4. ಪ್ರತಿ ಗ್ರಾಮದ ರಸ್ತೆಗಳಲ್ಲಿ ಕ್ರಿಮಿನಾಶಕವನ್ನು ಸಿಂಪಡಿಸುವುದು,
5. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಎಲ್ಲಾ ಶಾಲಾ-ಕಾಲೇಜುಗಳ ಕಟ್ಟಡಗಳು, ಅಂಗನವಾಡಿ ಕೇಂದ್ರಗಳು, ಗ್ರಂಥಾಲಯ ಕಟ್ಟಡಗಳು, ಸಮುದಾಯ ಭವನಗಳನ್ನು, ಪಂಚಾಯತಿ ಕಚೇರಿ ಕಟ್ಟಡಗಳನ್ನು, ಮಾರುಕಟ್ಟೆ ಪ್ರದೇಶಗಳನ್ನು, ಅಂಚೆ ಕಚೇರಿ ಮುಂತಾದ ಪ್ರದೇಶಗಳಲ್ಲಿ ಹಾಗೂ ಜನಸಂದಣಿ ಹೆಚ್ಚು ಸೇರುವ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡಲು ಆದ್ಯತೆಯನ್ನು ನೀಡುವುದು. ಈ ಎಲ್ಲಾ ಕಟ್ಟಡಗಳ ಒಳಗೂ ಹಾಗೂ ಹೊರಾಂಗಣಗಳಲ್ಲಿ ಕ್ರಿಮಿನಾಶಕಗಳನ್ನು ಆಗಿಂದಾಗ್ಗೆ ಸಿಂಪಡಿಸುತ್ತಿರಬೇಕು.
6. ಸ್ವಚ್ಛತೆಯನ್ನು ನಿರ್ವಹಿಸುವ ಸ್ವಚ್ಛತಾಗಾರರಿಗೆ ಮುಖಗವಸು(Mask), ಕಣ್ಣಿನ ರಕ್ಷಣೆಗೆ ಕನ್ನಡಕಗಳನ್ನು, ಗಮ್‌ಬೂಟುಗಳನ್ನು ಮತ್ತು ಪ್ರತಿ ರಸ್ತೆಯಲ್ಲಿಯೂ ಕಸ ಕಡ್ಡಿಗಳನ್ನು ಸಂಗ್ರಹಿಸಲು, ಕಸ ಸಂಗ್ರಹಣೆಯನ್ನು ನಿರ್ವಹಿಸಲು ಡಸ್ಟ್ ಬಿನ್‌ಗಳನ್ನು ಒದಗಿಸುವುದು.

ಈ ಮೇಲೆ ವಿವರಿಸಿರುವ ಎಲ್ಲಾ ಕಾರ್ಯಗಳನ್ನು ನಿರ್ವಹಿಸಲು ತಗಲುವ ವೆಚ್ಚವನ್ನು 14ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನದಿಂದ ಭರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಎಲ್ಲಾ ಕಾರ್ಯಗಳ ಜೊತೆಗೆ ಉಲ್ಲೇಖ(2)ರ ಅರೆ ಸರ್ಕಾರಿ ಪತ್ರದಲ್ಲಿ ತಿಳಿಸಿರುವಂತೆ ಕಾರ್ಯಕ್ರಮಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

1. ಪ್ರಮುಖವಾಗಿ ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗಿರುವ ಕ್ವಾರಂಟೈನ್ ಹಾಗೂ ಐಸೋಲೇಷನ್ ಕೇಂದ್ರಗಳನ್ನು ನಿರ್ವಹಿಸುವುದು.
2. ಜನಸಾಮಾನ್ಯರಿಗೆ ರೋಗದ ಹರಡುವಿಕೆಯ ಬಗ್ಗೆ ಜನಜಾಗೃತಿ ಮೂಡಿಸುವುದು,
3. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಕೂಲಿ ಕಾರ್ಮಿಕರು, ವಲಸೆ ಕಾರ್ಮಿಕರು ಹಾಗೂ ಕಡು ಬಡತನದ ಸಮುದಾಯಕ್ಕೆ ಮತ್ತು ಅವಶ್ಯವಿದ್ದವರಿಗೆ ಆಹಾರ ಪದಾರ್ಥಗಳನ್ನು ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವುದು.
4. ಅವಶ್ಯವಿರುವ ಜನತೆಗೆ ಸ್ವಚ್ಛತೆಗಾಗಿ ಅವಶ್ಯವಿರುವ ಆಲ್ಕೋಹಾಲ್ ಆಧಾರಿತ ಸ್ಯಾನಿಟೈಸರ್ಗಳು ಒದಗಿಸುವುದು ಗ್ರಾಮ ಪಂಚಾಯತಿಗಳ ಆದ್ಯ ಕರ್ತವ್ಯವಾಗಿರುತ್ತದೆ.

ಕೋವಿಡ್-19 ಸಾಂಕ್ರಾಮಿಕ ರೋಗವನ್ನು ಯಶಸ್ವಿಯಾಗಿ ತಡೆಗಟ್ಟಲು ಅವಶ್ಯವಿರುವ ಎಲ್ಲಾ ತುರ್ತು ಕ್ರಮಗಳನ್ನು ಪ್ರಥಮ ಆದ್ಯತೆಯ ಮೇಲೆ ಕೈಗೊಳ್ಳುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ. 14ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನಕ್ಕೆ ಈಗಾಗಲೇ ಕ್ರಿಯಾ ಯೋಜನೆಗಳನ್ನು ರೂಪಿಸಿಕೊಂಡಿದ್ದರೆ ಅವುಗಳನ್ನು ಬದಲಾಯಿಸಿ ಮೇಲೆ ತಿಳಿಸಿದ ಕಾರ್ಯಕ್ರಮಗಳನ್ನು

ಹಮ್ಮಿಕೊಳ್ಳಲು ಮತ್ತು ಅನುಷ್ಠಾನಗೊಳಿಸಲು ಅನುವಾಗುವಂತೆ ಕ್ರಿಯಾಯೋಜನೆಯನ್ನು ಮಾರ್ಪಡಿಸಿಕೊಳ್ಳುವಂತೆ ಸಹ ತಿಳಿಸಿದೆ.

17/04/2020
(ಸಿ.ಮಂಜುನಾಥ್)

ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

17.04.2020

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.
3. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-1 ಮತ್ತು 2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ